## ಬಂಟ್ವಾಳ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ

ಸಿಸಿ ನಂ. 988/2022

ಪ್ರಾಸಾ : 06
ಚಾಸಾ : 04

| | | |
|---|---|---|
| ಹೆಸರು | : | ಅಬ್ದುಲ್ ಹಮೀದ್ |
| ತಂದೆಯ ಹೆಸರು | : | ಹಸನಬ್ಬ |
| ಪ್ರಾಯ | : | 47 ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಗೋಳ್ತಮಜಲು ಗ್ರಾಮ |

---

ದಿಃ 20.03/2024 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

---

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

1. ಪ್ರಕರಣದ ಬಗ್ಗೆ ನನಗೇನು ಗೊತ್ತಿಲ್ಲ. ನಾನು ಯಾವುದೇ ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ . ನಿಪಿ-17 ಮತ್ತು 18 ರಲ್ಲಿರುವ ಸಹಿಗಳನ್ನು ಸಾಕ್ಷಿ ತನ್ನದೆಂದು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-17(ಸಿ) ಮತ್ತು ನಿಪಿ-18(ಸಿ) ಎಂದು ಗುರುತಿಸಲಾಯಿತು . ಅವುಗಳಿಗೆ ಸಮಾರು ವರ್ಷಗಳ ಹಿಂದೆ ಠಾಣೆಯಲ್ಲಿ ಸಹಿ ಹಾಕಿರುತ್ತೇನೆ ಅವುಗಳಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಮತ್ತು ನಿಪಿ-2 ರಿಂದ 9 ರ ಪೋಟೋದಲ್ಲಿ ಕಾಣುವ ವಾಹನಗಳನ್ನು ಸಾಕ್ಷಿ ನೋಡಿ ಗುರುತಿಸಿರುವುದಿಲ್ಲ .

(ಈ ಹಂತದಲ್ಲಿ ಮಾನ್ಯ ಎ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಎಪಿಪಿಯವರಿಂದಃ</u> -

2. ದಿಃ07.06.2022 ರಂದು ಮದ್ಯಾಹ್ನ 2.00 ಸಮಯ ಬಂಟ್ವಾಳ ತಾಲೂಕು ಗೋಳ್ತಮಜಲು ಗ್ರಾಮದ ಪೂರ್ಲಿಪಾಡಿ ಎಂಬಲ್ಲಿ ಮಾಣಿ ಕಡೆಯಿಂದ ಬಿ ಸಿ ರೋಡ್ ಕಡೆಗೆ ಕೆಎ-19 ಎಮ್ ಬಿ-6218 ಕಾರನ್ನು ಆರೋಪಿಯು ದುಡುಕುತನ ಮತ್ತು ನಿರ್ಲಕ್ಷತನದಿಂದ ತೀರ ಎಡ ಬದಿಗೆ ಚಲಾಯಿಸಿಕೊಂಡು ಬಂದು ಕಚ್ಚಾ ರಸ್ತೆಯಲ್ಲಿ ನಿಲ್ಲಿಸಿದ್ದ ಕೆಎ-19-ಎಸಿ-1770 ಟೆಂಪೋಗೆ ಸಿಮೇಂಟ್ ಶೀಟ್ ಲೋಡ್ ಮಾಡುತ್ತಿದ್ದ ಮೃತ ನೌಶದಗೆ ಗುದ್ದಿ ನಂತರ ಟೆಂಪೋ ಹಿಂಬದಿಗೆ ಡಿಕ್ಕಿ ಹೊಡೆದು ಅಪಘಾತ ಉಂಟಾಗಿರುತ್ತದೆ ಎಂದರೆ ಸರಿಯಲ್ಲ .

3. ನಾನು ಚಾಸಾ-3 ರವರ ಬಾಬ್ತು ಕೆಎಮ್ ಬೇಕರಿಗೆ ತಿಂಡಿ ತಿನಿಸುಗಳನ್ನು ನೀಡುತ್ತಿದ್ದ ಸಮಯ ಸದರಿ ಅಪಘಾತವನ್ನು ನಾನು ಕಣ್ಣಾರೆ ನೋಡಿರುತ್ತೇನೆ ಎಂದರೆ ಸರಿಯಲ್ಲ .

4. ದಿ. 0806.2022 ರಂದು ಸ್ಥಳಕ್ಕೆ ಪೋಲಿಸರು ಬಂದಿದ್ದಾಗ ನಾನು ತಕ್ಷಿರು ಸ್ಥಳವನ್ನು ತೋರಿಸಿಕೊಟ್ಟಿರುತ್ತೇನೆ ಮತ್ತು ಅಪಘಾತಕ್ಕೊಳಗಾದ ಟೆಂಪೋ ಹಾಗೂ ಕಾರನು ಪೋಲಿಸರು ವಶಪಡಿಸಿಕೊಂಡು ಜರುಗಿಸಿದ ನಿಪಿ-17 ಮತ್ತು 18 ಕ್ಕೆ ಪಂಚರಾಗಿ ಚಾಸಾ-5 ,6 ಮತ್ತು ನಾನು ಸಹಿ ಹಾಕಿರುತ್ತೇವೆ ಎಂದರೆ ಸರಿಯಲ್ಲ . ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಈಗ ಓದಿ ಹೇಳಿದಂತೆ ತನಿಖಾಧಿಕಾರಿಯ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ನಿರಾಕರಿಸಿದ

ಹೇಳಿಕೆಯ ಭಾಗವನ್ನು ನಿಪಿ-19 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರಃ ಶ್ರೀ ವಕೀಲರಿಂದಃಇರುವುದಿಲ್ಲ</u>

ಮರುವಿಚಾರಣೆಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,
ಬಂಟ್ವಾಳ